# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್ ರಸ್ತೆ, ತುಮಕೂರು -572103

ಸಂಖ್ಯೆ:ತುವಿ:ಶೈ.ವಿ:UG:2026-27:1136 ದಿನಾಂಕ:30.06.2026

## ಸುತ್ತೋಲೆ

ವಿಷಯ : 2026-27ನೇ ಶೈಕ್ಷಣಿಕ ಸಾಲಿನ ಪ್ರಥಮ ವರ್ಷದ ಸ್ನಾತಕ ಪದವಿ ಪ್ರೋಗ್ರಾಂಗಳ ಪ್ರವೇಶಾತಿ ದಿನಾಂಕವನ್ನು ವಿಸ್ತರಿಸಿರುವ ಕುರಿತು.

ಉಲ್ಲೇಖ:
1. ವಿವಿ ಶೈಕ್ಷಣಿಕ ವೇಳಾಪಟ್ಟಿ ಅಧಿಸೂಚನೆ ಪತ್ರದ ಸಂಖ್ಯೆ: ಸಂಖ್ಯೆ: ತುವಿ: ಶೈವಿ:UG:CE:2026-27 /203 ದಿನಾಂಕ:16.04.2026.
2. ವಿವಿ ಶೈಕ್ಷಣಿಕ ವೇಳಾಪಟ್ಟಿ ಅಧಿಸೂಚನೆ ಪತ್ರದ ಸಂಖ್ಯೆ: ಸಂಖ್ಯೆ: ತುವಿ: ಶೈವಿ:UG:CE:2026-27 /1026 ದಿನಾಂಕ:20.06.2026
3. ಅಧ್ಯಕ್ಷರು, ತುಮಕೂರು ವಿಶ್ವವಿದ್ಯಾನಿಲಯ ಕಾಲೇಜು ಅಧ್ಯಾಕರ ಸಂಘ (ರಿ) ತುಮಕೂರು ಇವರ ಪತ್ರ ದಿನಾಂಕ:19.06.2026.
4. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:30.06.2026

*****

ಮೇಲ್ಕಂಡ ಉಲ್ಲೇಖಿತ ವಿಷಯಕ್ಕೆ ಸಂಬಂಧಿಸಿದಂತೆ, ತುಮಕೂರು ವಿಶ್ವವಿದ್ಯಾನಿಲಯದ ಸಂಯೋಜಿತ/ ಘಟಕ/ ಸ್ವಾಯತ್ತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ತಿಳಿಯಪಡಿಸುವುದೇನೆಂದರೆ, ಉಲ್ಲೇಖ (01) ಮತ್ತು (02)ರ ಶೈಕ್ಷಣಿಕ ವೇಳಾಪಟ್ಟಿಯನ್ವಯದಂತೆ, ವಿಶ್ವವಿದ್ಯಾನಿಲಯದ 2026-27 ನೇ ಶೈಕ್ಷಣಿಕ ಸಾಲಿನ ಪ್ರಥಮ ವರ್ಷದ ಪ್ರವೇಶಾತಿ ದಿನಾಂಕ:02.07.2026ಕ್ಕೆ ಮುಕ್ತಾಯವಾಗಲಿದ್ದು, ಉಲ್ಲೇಖ(03)ರ ಮನವಿಯ ಮೇರೆಗೆ ಪ್ರಥಮ ವರ್ಷದ ವಿವಿಧ ಸ್ನಾತಕ ಪದವಿ ಕೋರ್ಸುಗಳ ಪ್ರವೇಶಾತಿಗೆ ಸಂಬಂಧಿಸಿದಂತೆ ಈ ಕೆಳಕಂಡ ಕೋಷ್ಟಕದಲ್ಲಿ ತಿಳಿಸಿರುವಂತೆ ಪ್ರವೇಶಾತಿ ದಿನಾಂಕವನ್ನು ಉಲ್ಲೇಖ (04)ರ ಮಾನ್ಯ ಕುಲಪತಿಗಳ ಅನುಮೋದನೆ ಮೇರೆಗೆ ವಿಸ್ತರಿಸಿ ನಿಗದಿಪಡಿಸಲಾಗಿದೆ.

| ಕ್ರ.ಸಂ | ವಿವರ | ಪ್ರವೇಶಾತಿಗಾಗಿ ನಿಗದಿಪಡಿಸಿರುವ ದಿನಾಂಕ |
|---|---|---|
| 1 | ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ದಂಡ ಶುಲ್ಕವಿಲ್ಲದೆ ಪ್ರವೇಶಾತಿಯ ಕೊನೆಯ ದಿನಾಂಕ | 24.07.2026 |
| 2 | ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ರೂ.1400/- ದಂಡ ಶುಲ್ಕದೊಂದಿಗೆ ಪ್ರವೇಶಾತಿಯ ಕೊನೆಯ ದಿನಾಂಕ | 31.07.2026 |

ಮುಂದುವರೆದಂತೆ, ಸದರಿ ದಿನಾಂಕದವರೆಗೂ ಯುಯುಸಿಎಂಎಸ್ ಪೋರ್ಟಲ್‌ನ್ನು ಸಕ್ರಿಯಗೊಳಿಸಲಾಗಿದೆ. ಹಾಗೂ ಇನ್ನುಳಿದಂತೆ ಉಲ್ಲೇಖ (01) ಅಧಿಸೂಚನೆಲ್ಲಿ ಯಾವುದೇ ಬದಲಾವಣೆಯಿರುವುದಿಲ್ಲ. ಒಂದು ವೇಳೆ ವಿಶ್ವವಿದ್ಯಾನಿಲಯವು ನಿಗಧಿಪಡಿಸಿರುವ ದಿನಾಂಕದೊಳಗೆ ಪ್ರವೇಶ ಪ್ರಕ್ರಿಯೆಯನ್ನು ಪೂರ್ಣಗೊಳಿಸದಿದ್ದಲ್ಲಿ ಕಾಲೇಜಿನವರೆ ಜವಾಬ್ದಾರರಾಗಿರುತ್ತೀರಿ ಎಂದು ಈ ಮೂಲಕ ತಿಳಿಸಲಾಗಿದೆ.

ಆದೇಶದ ಮೇರೆಗೆ,

ಉಪಕುಲಸಚಿವರು

ಉಪಕುಲಸಚಿವರು

ಶೈಕ್ಷಣಿಕ ವಿಭಾಗ

ತುಮಕೂರು ವಿಶ್ವವಿದ್ಯಾನಿಲಯ

ಗೆ

1. ಪ್ರಾಂಶುಪಾಲರುಗಳು ಎಲ್ಲಾ ಸಂಯೋಜಿತ /ಸ್ವಾಯತ್ತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು.
2. ಪ್ರಾಂಶುಪಾಲರುಗಳು ವಿಶ್ವವಿದ್ಯಾನಿಲಯ ಘಟಕ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು.

ಪ್ರತಿಗಳು:

1. ಕುಲಸಚಿವರು (ಮೌಲ್ಯಮಾಪನ) ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು- ವೆಬ್‌ಸೈಟ್‌ನಲ್ಲಿ ಇಂದೇ ಪ್ರಕಟಿಸುವುದು
5. ಕಛೇರಿ ಪ್ರತಿ.